ಉದಯವಾಣಿ

**Saturday 29th July 2023, Page No.07**

**Presenting Doctorate of Science: RSST Hon. Sec.A.V.S. Murthy**



# ಆದಿಚುಂಚನಗಿರಿ ಶ್ರೀ ಸೇರಿ ಮೂವರಿಗೆ ಡಾಕ್ಟರ್ ಆಫ್ ಸೈನ್ಸ್ ಗೌರವ

**ಬೆಳಗಾವಿ:** ವಿಶ್ವೇಶ್ವರಯ್ಯ ತಾಂತ್ರಿಕ ವಿವಿ 23ನೇ ಘಟಿಕೋತ್ಸವ ಆ.1ರಂದು ವಿಟಿಯು ಜ್ಞಾನ ಸಂಗಮ ಆವರಣದ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಸಭಾಂಗಣದಲ್ಲಿ ಆಯೋಜಿಸಲಾಗಿದ್ದು ಆದಿಚುಂಚನಗಿರಿ ಶ್ರೀ ಸೇರಿ ಮೂವರಿಗೆ ಡಾಕ್ಟರ್ ಆಫ್ ಸೈನ್ಸ್ ಗೌರವ ಪದವಿ ಪ್ರದಾನ ಮಾಡಲಾಗುವುದು ಎಂದು ವಿಟಿಯು ಕುಲಪತಿ ಪ್ರೊ। ವಿದ್ಯಾಶಂಕರ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯಪಾಲ ಥಾವರ ಚಂದ್ ಗೆಹಲೋತ್ ಅಧ್ಯಕ್ಷತೆ ವಹಿಸಲಿದ್ದು, ಚೆನ್ನೈನ ಭಾರತೀಯ ತಂತ್ರಜ್ಞಾನ ಸಂಸ್ಥೆಯ ಮದ್ರಾಸ್(ಐಐ ಟಿಎಂ) ನಿರ್ದೇಶಕ ಪ್ರೊ।ವಿ. ಕಾಮಕೋಟಿ ಘಟಿಕೋತ್ಸವದ ಭಾಷಣ ಮಾಡಲಿದ್ದಾರೆ. ಉನ್ನತ ಶಿಕ್ಷಣ ಸಚಿವ ಡಾ।ಎಂ.ಸಿ. ಸುಧಾಕರ ಉಪಸ್ಥಿತರಿರಲಿದ್ದಾರೆ. ಆದಿಚುಂಚನಗಿರಿ ಮಹಾಸಂಸ್ಥಾನದ ಮಠದ ಡಾ। ನಿರ್ಮಲಾನಂದನಾಥ ಸ್ವಾಮೀಜಿ, ರಾಷ್ಟ್ರೀಯ ಶಿಕ್ಷಣ ಸಮಿತಿ ಸಂಸ್ಥೆ ಗೌರವ ಕಾರ್ಯದರ್ಶಿ ಡಾ।ಎ.ವಿ.ಎಸ್.ಮೂರ್ತಿ ಹಾಗೂ ಬೆಂಗಳೂರಿನ ಮೈಸೂರು ಮೆಕ್ಯಾನಿಕ್ ಟೈಲ್ ಕಂಪನಿ ಲಿಮಿಟೆಡ್ ಅಧ್ಯಕ್ಷ ಎಚ್.ಎಸ್. ಶೆಟ್ಟಿ ಅವರಿಗೆ ಡಾಕ್ಟರ್ ಆಫ್ ಸೈನ್ಸ್ ಗೌರವ ಪದವಿ ಪ್ರದಾನ ಮಾಡಲಾಗುವುದು ಎಂದರು.

ನಿರ್ಮಲಾನಂದ ನಾಥ ಸ್ವಾಮೀಜಿ

ಡಾ।ಎ.ವಿ.ಎಸ್. ಮೂರ್ತಿ

ಎಚ್.ಎಸ್. ಶೆಟ್ಟಿ